# ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಯಶಸ್ವಿ




**ಕೊಂಕಣವಾಹಿನಿ ನ್ಯೂಸ್,**

**ಹಳಿಯಾಳ :** ದೇಶ ಕಂಡ ಅಪ್ರತಿಮ ಇಂಜಿನಿಯರ್ ಸರ್ ಎಂ. ವಿಶ್ವೇಶ್ವರಯ್ಯನವರ ಜನ್ಮದಿನದ ಪ್ರಯುಕ್ತ ಪಟ್ಟಣದ ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಸೋಮವಾರ ಆಯೋಜಿಸಲಾಗಿತ್ತು.

ಪದ್ಮಶ್ರೀ ಆರ್ ಬಿ ಪಾಟೀಲ್ ಕ್ಯಾನ್ಸರ್ ಹಾಸ್ಪಿಟಲ್ ನವನಗರದ ಡಾ. ಉಮೇಶ್ ಹಳ್ಳಿ ಕೇರಿಯವರು ಅತಿಥಿಗಳಾಗಿ ಆಗಮಿಸಿ ಮಾತನಾಡಿ ರಕ್ತದಾನ ಮಹಾದಾನವಾಗಿದ್ದು, ಜೀವವನ್ನು ಉಳಿಸಬಹುದಾಗಿದೆ ಎಂದರು. ಉತ್ತಮ ರಕ್ತವನ್ನು ಹೊಂದಲು ವಿದ್ಯಾರ್ಥಿಗಳು ಮಾದಕ ಪದಾರ್ಥಗಳನ್ನು ಸೇವಿಸದಂತೆ ಕಿವಿಮಾತು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಇದ್ದರು. 80ಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಿದರು. ವಿಆರ್‌ಡಿಎಂ ಟ್ರಸ್ಟ್‌ನ ಪ್ರಕಾಶ್ ಪ್ರಭು ಹಾಗೂ ಎನ್‌ಎಸ್‌ಎಸ್ ಘಟಕದ ಸಂಚಾಲಕ ಪ್ರೊ. ಸಂತೋಷ ಸವಣೂರ್, ರೆಡ್ ರಿಬ್ಬನ್ ಕ್ಲಬ್ ಸಂಚಾಲಕಿ ಪ್ರೊ. ಜ್ಯೋತಿ ಕಮ್ಮಾರ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ, ರೆಡ್ ರಿಬ್ಬನ್ ಕ್ಲಬ್ ಮತ್ತು ವಿಆರ್‌ಡಿಎಂ ಟ್ರಸ್ಟ್‌ನ ಸಯೋಗದಲ್ಲಿ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು.

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಯಶಸ್ವಿ




**ಹಳ್ಳಿಯ ಸಂದೇಶ ನ್ಯೂಸ್**

ಹಳಿಯಾಳ: ದೇಶ ಕಂಡ ಅಪ್ರತಿಮ ಇಂಜಿನಿಯರ್ ಸರ್ ಎಂ ವಿಶ್ವೇಶ್ವರಯ್ಯನವರ ಜನ್ಮದಿನದ ಪ್ರಯುಕ್ತ ಪಟ್ಟಣದ ಕೆ ಎಲ್ ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಸಪ್ಟೆಂಬರ್ 15ರಂದು ಆಯೋಜಿಸಲಾಗಿತ್ತು. ಪದ್ಮಶ್ರೀ ಆರ್ ಬಿ ಪಾಟೀಲ್ ಕ್ಯಾನ್ಸರ್ ಹಾಸ್ಪಿಟಲ್ ನವನಗರದ ಡಾ. ಉಮೇಶ್ ಹಳ್ಳಿ ಕೇರಿಯವರು ಅತಿಥಿಗಳಾಗಿ ಈ ಶಿಬಿರಕ್ಕೆ ಆಗಮಿಸಿದ್ದರು. ರಕ್ತದಾನ ಮಹಾದಾನವಾಗಿದ್ದು, ರಕ್ತದಾನದಿಂದ ಜೀವವನ್ನು ಉಳಿಸಬಹುದಾಗಿದೆ ಎಂದು ಹೇಳಿದರು.

ಉತ್ತಮ ರಕ್ತವನ್ನು ಹೊಂದಲು ವಿದ್ಯಾರ್ಥಿಗಳು ಮಾದಕ ವ್ಯಸನ ಸೇವಿಸದಂತೆ ಕಿವಿಮಾತು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ವೇದಿಕೆ ಮೇಲೆ ಉಪಸ್ಥಿತರಿದ್ದರು.

80ಕ್ಕೂಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಿದರು. ವಿ ಆರ್ ಡಿ ಎಂ ಟ್ರಸ್ಟ್ ನ ಪ್ರಕಾಶ್ ಪ್ರಭು ಹಾಗೂ ಎನ್ಎಸ್ಎಸ್ ಘಟಕದ ಸಂಚಾಲಕ ಪ್ರೊ. ಸಂತೋಷ ಸವಣೂರ್, ರೆಡ್ ರಿಬ್ಬನ್ ಕ್ಲಬ್ ಸಂಚಾಲಕಿ ಪ್ರೊ. ಜ್ಯೋತಿ ಕಮ್ಮಾರ್ ಕಾರ್ಯಕ್ರಮವನ್ನು ಆಯೋಜಿಸಿದ್ದರು.

ಮಹಾವಿದ್ಯಾಲಯದ ಎನ್ಎಸ್ಎಸ್ ಘಟಕ, ರೆಡ್ ರಿಬ್ಬನ್ ಕ್ಲಬ್ ಮತ್ತು ವಿ ಆರ್ ಡಿ ಎಂ ಟ್ರಸ್ಟ್ ನ ಸಯೋಗದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.



Powered By KHUSHIHOST ® | License - ePaperCloud.com

ಹೊಸ ದಿಗಂತ
13
16 Sep 2025

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಯಶಸ್ವಿ




**ಹಳಿಯಾಳ :** ದೇಶ ಕಂಡ ಅಪ್ರತಿಮ ಇಂಜಿನಿಯರ್ ಸರ್.ಎಂ.ವಿಶ್ವೇಶ್ವರಯ್ಯನವರ ಜನ್ಮದಿನದ ಪ್ರಯುಕ್ತ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಸೆಪ್ಟೆಂಬರ್ 15ರಂದು ಆಯೋಜಿಸಲಾಗಿತ್ತು. ಪದ್ಮಶ್ರೀ ಆರ್‌ಬಿಪಾಟೀಲ್ ಕ್ಯಾನ್ಸರ್ ಹಾಸ್ಪಿಟಲ್ ನವನಗರದ ಡಾ.ಉಮೇಶ್ ಹಳ್ಳಿ ಕೇರಿಯವರು ಅತಿಥಿಗಳಾಗಿ ಶಿಬಿರಕ್ಕೆ ಆಗಮಿಸಿದ್ದರು.

ರಕ್ತದಾನ ಮಹಾದಾನವಾಗಿದ್ದು, ರಕ್ತದಾನದಿಂದ ಜೀವವನ್ನು ಉಳಿಸಬಹುದಾಗಿದೆ ಎಂದು ಹೇಳಿದರು. ಉತ್ತಮ ರಕ್ತವನ್ನು ಹೊಂದಲು ವಿದ್ಯಾರ್ಥಿಗಳು ಮಾದಕ ಪದಾರ್ಥಗಳನ್ನು ಸೇವಿಸದಂತೆ ಕಿವಿಮಾತು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ.ವಿ.ಎ ಕುಲಕರ್ಣಿ ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ವೇದಿಕೆ ಮೇಲೆ ಉಪಸ್ಥಿತರಿದ್ದರು. 80ಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಿದರು.

ವಿಆರ್‌ಡಿ ಎಂ ಟ್ರಸ್ಟ್ ನ ಶ್ರೀಪ್ರಕಾಶ್ ಪ್ರಭು ಹಾಗೂ ಎನ್‌ಎಸ್‌ಎಸ್ ಘಟಕದ ಸಂಚಾಲಕ ಪ್ರೊ. ಸಂತೋಷ ಸವಣೂರ್, ರೆಡ್ ರಿಬ್ಬನ್ ಕ್ಲಬ್ ಸಂಚಾಲಕಿ ಪ್ರೊ. ಜ್ಯೋತಿ ಕಮ್ಮಾರ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ, ರೆಡ್ ರಿಬ್ಬನ್ ಕ್ಲಬ್ ಮತ್ತು ವಿಆರ್‌ಡಿಎಂ ಟ್ರಸ್ಟ್ ನ ಸಹಯೋಗದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.